ತಂತಿ : UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ :registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು-570 005.

ವಿಷಯ: 2022–23ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ: ಇಟಿII/45/2019–20 ದಿನಾಂಕ: 06.03.2023.
2. ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆಯ ಸಂಬಂಧ ದಿನಾಂಕ: 10.03.2023ರಂದು ಜರುಗಿದ ಆಯ್ಕೆ ಸಮಿತಿ ಸಭೆಯ ನಡಾವಳಿ.
3. ದಿನಾಂಕ: 25.05.2023ರಂದು ಜರುಗಿದ ಸಿಂಡಿಕೇಟ್ ಸಭೆಯ ತೀರ್ಮಾನ.
4. ಮಾನ್ಯ ಕುಲಪತಿಯವರ ಆದೇಶ ದಿನಾಂಕ: 13.06.2023.

*****

## ಆದೇಶ ಸಂಖ್ಯೆ: ಇಟಿ9/263/2018–19 ದಿನಾಂಕ 14–06–2023(2)

ದಿನಾಂಕ: 10.03.2023ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ಶಿಫಾರಸ್ಸು(ನಿರ್ಣಯ) ಹಾಗೂ ತತ್ಸಂಬಂಧ ದಿನಾಂಕ: 25.05.2023ರಂದು ಜರುಗಿದ ಸಿಂಡಿಕೇಟ್ ಸಭೆಯ ತೀರ್ಮಾನ ಮತ್ತು ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯವನ್ನು ನಿರ್ವಹಿಸಲು 2022–23ನೇ ಶೈಕ್ಷಣಿಕ ಸಾಲಿಗೆ ಮಾತ್ರ ಈ ಕೆಳಕಂಡಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಕ್ರ ಸಂ. | ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ನಿಗದಿಪಡಿಸಿರುವ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ(ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ/ ಸ್ನಾತಕೋತ್ತರ ಕೇಂದ್ರ/ ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| 01. | ಡಾ. ಸೌಮ್ಯ ಎಂ. ಎಸ್., #880, 2ನೇ ಹಂತ, ವಿನಯ ಮಾರ್ಗ, ಸಿದ್ಧಾರ್ಥನಗರ, ಮೈಸೂರು – 5600011. ಮೊ. ಸಂ: 7975852068. | ಕಾನೂನು (ಬಿ.ಎ. ಎಲ್‌ಎಲ್‌ಬಿ/ ಬಿ.ಕಾಂ ಎಲ್‌ಎಲ್‌ಬಿ) | 12 | ಸ್ಕೂಲ್ ಆಫ್ ಲಾ, ಮಾನಸಗಂಗೋತ್ರಿ, ಮೈಸೂರು. | 28,000/– |
| 02. | ಶ್ರೀ. ಪ್ರಜ್ವಲ್ ಎಸ್., #437, 22ನೇ ಮೇನ್, 2ನೇ ಹಂತ, 18ನೇ ಕ್ರಾಸ್, ಜೆ.ಪಿ ನಗರ, ಮೈಸೂರು. ಮೊ. ಸಂ: 8867993172. | ಕಾನೂನು (ಬಿ.ಎ. ಎಲ್‌ಎಲ್‌ಬಿ/ ಬಿ.ಕಾಂ ಎಲ್‌ಎಲ್‌ಬಿ) | 12 | ಸ್ಕೂಲ್ ಆಫ್ ಲಾ, ಮಾನಸಗಂಗೋತ್ರಿ, ಮೈಸೂರು. | 24,000/– |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಸ್ನಾತಕೋತ್ತರ ಕೇಂದ್ರದ ಕೆಲಸದ ಮೊಹಾವಡಿಯಲ್ಲಿ [illegible] ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ:ಕಾಶಿಇ/44/ಅಅನೇ/2012–13ನೇ ಪಾವಿ–1, ದಿನಾಂಕ 02–07–2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಅ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಆ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಇ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2022-23ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರುಗಳು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು:

## ಮುಚ್ಚಳಿಕೆ

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2022-23ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಹೆಚ್ಚುವರಿ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ಕಾರಣಾಂತರಗಳಿಂದ ಹೆಚ್ಚುವರಿ ಬೋಧನಾ ಕಾರ್ಯದಲ್ಲಿ ಕೊರತೆಯುಂಟಾದಲ್ಲಿ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಆಉಶೇ/2012-13ನೇ ಹಾವಿ-1, ದಿನಾಂಕ 02-07-2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಬಹುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧರಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಮೇಲಿನಂತೆ 12 ಗಂಟೆಗಳ ಕಾರ್ಯಭಾರವನ್ನು ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವುದು ಕಂಡುಬಂದಲ್ಲಿ ಅವರುಗಳನ್ನು ಸಂಬಂಧಪಟ್ಟ ವಿಭಾಗಾಧ್ಯಕ್ಷರು/ನಿರ್ದೇಶಕರು ಅವರುಗಳನ್ನು ಸೇವೆಯಿಂದ ಬಿಡುಗಡೆಗೊಳಿಸಿ ವಿಶ್ವವಿದ್ಯಾನಿಲಯದ ಗಮನಕ್ಕೆ ತರುವುದು.

ಆದೇಶದ ಮೇರೆಗೆ,

ಕುಲಸಚಿವ,

ಮೈಸೂರು ವಿಶ್ವವಿದ್ಯಾನಿಲಯ,

ಮೈಸೂರು.

ಇವರಿಗೆ;

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ – ಅಧ್ಯಕ್ಷರು, ಸ್ಕೂಲ್ ಆಫ್ ಲಾ, ಮಾನಸಗಂಗೋತ್ರಿ, ಮೈಸೂರು., ಇವರ ಮುಖಾಂತರ.
2. ಅಧ್ಯಕ್ಷರು, ಸ್ಕೂಲ್ ಆಫ್ ಲಾ, ಮಾನಸಗಂಗೋತ್ರಿ, ಮೈಸೂರು – ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು ಮತ್ತು ವಿದ್ಯಾರ್ಹತೆಗೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ ದೃಢಪಡಿಸಿಕೊಂಡು, ಕೆಲಸಕ್ಕೆ ವರದಿ ಮಾಡಿಸಿಕೊಳ್ಳುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಆಡಳಿತಾಧಿಕಾರಿಯವರು, ಮಾನಸಗಂಗೋತ್ರಿ, ಮೈಸೂರು.
6. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು.
7. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.